# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 563

2) ಮಾನ್ಯ ಸದಸ್ಯರ ಹೆಸರು : ಡಾ: ಕೆ.ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು)

3) ಉತ್ತರಿಸುವ ದಿನಾಂಕ : 20.02.2023

4) ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮುಖ್ಯ ಮಂತ್ರಿಗಳು, ದೇಶ ವಿದೇಶಗಳ ಗಣ್ಯಾತಿಗಣ್ಯರುಗಳು ಸಂಚರಿಸುವ ಪ್ರಮುಖ ರಸ್ತೆ ಮಾರ್ಗದ ಸಂಚಾರ ನಿರ್ವಹಣೆ ಜವಾಬ್ದಾರಿ ನಿಭಾಯಿಸುತ್ತಿರುವ ಹೆಬ್ಬಾಳ ಸಂಚಾರ ಪೊಲೀಸ್ ಠಾಣೆಯ ಮಹಿಳಾ ಸಿಬ್ಬಂದಿಗಳಿಗೆ ಶೌಚಾಲಯದ ಸೌಲಭ್ಯವಿಲ್ಲದೆ ಹಾಗೂ ಇನ್ನಿತರೆ ಮೂಲಸೌಕರ್ಯಗಳಿಲ್ಲದೆ ಕುಸಿದು ಬೀಳುವ ಹಂತದಲ್ಲಿರುವ ತಾತ್ಕಾಲಿಕ ಶೆಡ್‌ನಲ್ಲಿಯೇ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಈ ಸಂಬಂಧ ಸರ್ಕಾರದ ಆದೇಶ ಸಂ :ಹೆಚ್‌ಡಿ 16 ಪಿಎಫ್‌ಎಸ್ 2017 ಬೆಂಗಳೂರು ದಿ : 02/01/2018 ರಲ್ಲಿ 2017-18ನೇ ಸಾಲಿನಲ್ಲಿ ಪೊಲೀಸ್ ಆಧುನೀಕರಣ ಯೋಜನೆಯಡಿಯಲ್ಲಿ ಹೆಬ್ಬಾಳ ಸಂಚಾರ ಪೊಲೀಸ್ ಠಾಣಾ ಕಟ್ಟಡವನ್ನು ನಿರ್ಮಾಣ ಮಾಡಲು ರೂ.250.00 ಲಕ್ಷಗಳಿಗೆ ಮಂಜೂರಾತಿ ಆದೇಶ ನೀಡಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ ಹತ್ತಾರು ವರ್ಷಗಳಿಂದ ಮರೀಚಿಕೆ ಆಗಿರುವ ಹೆಬ್ಬಾಳ ಸಂಚಾರ ಪೊಲೀಸ್ ಠಾಣೆಯನ್ನು ಉತ್ತಮ ಕಟ್ಟಡಕ್ಕೆ ಸ್ಥಳಾಂತರಿಸಲು ಅಥವಾ ಹೊಸ ಠಾಣೆ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರಗಳನ್ನು ಒದಗಿಸುವುದು) | ಹೆಬ್ಬಾಳ ಸಂಚಾರ ಪೊಲೀಸ್ ಠಾಣೆಯ ಕಟ್ಟಡವನ್ನು ನಿರ್ಮಾಣ ಮಾಡಲು ಬೆಂಗಳೂರು ಉತ್ತರ ತಾಲ್ಲೂಕು, ಜಕ್ಕೂರು ಸರ್ವೆ ನಂ.101 & 102 ರಲ್ಲಿ ಸೈಟ್ ನಂ. 505, 30*40 ನಿವೇಶನವನ್ನು ಮಂಜೂರು ಮಾಡಲಾಗಿರುತ್ತದೆ.<br>ಈ ಕುರಿತು ಜಕ್ಕೂರು ಸರ್ವೆ ನಂ. 100, 101 & 102 ರಲ್ಲಿ 8.05 ಗುಂಟೆ ಜಾಗಕ್ಕೆ ಸಂಬಂಧಿಸಿದಂತೆ, 2011 ರಲ್ಲಿ ಶ್ರೀ ನಾಗರಾಜು ಮತ್ತು ಶ್ರೀಮತಿ ನಾಗಮ್ಮ ರವರು 9ನೇ ಎಸಿಎಂಎಂ ನ್ಯಾಯಾಲಯದಲ್ಲಿ ಡಿ.ಎಸ್ ನಂ-650/2011 ಮತ್ತು 651/2011 ರಲ್ಲಿ ದಾವೆ ಹೂಡಲಾಗಿತ್ತು, ಅದರಂತೆ 2016 ರಲ್ಲಿ ಮಾನ್ಯ ನ್ಯಾಯಾಲಯವು ಸರ್ಕಾರದ ಪರವಾಗಿ ಆದೇಶ ಹೊರಡಿಸಲಾಗಿರುವುದರಿಂದ ಸದರಿಯವರುಗಳು ಆದೇಶದ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ RFA No.1210/2017 & 1211/2017 ರಲ್ಲಿ ವಿಚಾರಣಾ ಹಂತದಲ್ಲಿರುತ್ತದೆ. ಹಾಗೂ ಈ ಮೇಲಿನ ಕಾರಣಗಳಿಂದ ಸರ್ಕಾರದಿಂದ ಮಂಜೂರಾಗಿರುವ ಹೆಬ್ಬಾಳ ಸಂಚಾರ ಪೊಲೀಸ್ ಠಾಣೆಯ ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೊಂಡಿರುವುದಿಲ್ಲ. |

| | | |
|---|---|---|
| ಇ) | ಇಂತಹ ಪರಿಸ್ಥಿತಿ ಇನ್ನೂ ಹಲವಾರು ಪೊಲೀಸ್ ಠಾಣೆಗಳಲ್ಲಿದ್ದು ಇವುಗಳ ಪರಿಣಾಮಕಾರಿ ಕಾರ್ಯ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡಿರುವ ಸಮಗ್ರ ಯೋಜನೆಗಳೇನು? (ವಿವರಗಳನ್ನು ನೀಡುವುದು) | ಪೊಲೀಸ್ ಠಾಣೆಗಳ ಪರಿಣಾಮಕಾರಿ ಕಾರ್ಯ ನಿರ್ವಹಣೆಗೆ ರಾಜ್ಯಾದ್ಯಂತ ಒಟ್ಟು 100 ನೂತನ ಪೊಲೀಸ್ ಠಾಣಾ ಕಟ್ಟಡಗಳನ್ನು ರೂ.200.00 ಕೋಟಿಗಳ ವೆಚ್ಚದಲ್ಲಿ ನಿರ್ಮಾಣ ಮಾಡಲು ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ 41 ಪಿಬಿಎಲ್ 2021, ದಿನಾಂಕ:13/07/2021 ರಲ್ಲಿ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ. 31 ಪೊಲೀಸ್ ಠಾಣೆಗಳ ನೂತನ ಕಟ್ಟಡ ನಿರ್ಮಾಣ ಕಾಮಗಾರಿಯು ಪೂರ್ಣಗೊಂಡಿರುತ್ತದೆ. ಬಾಕಿ ಉಳಿದ 69 ಪೊಲೀಸ್ ಠಾಣೆಗಳ ಕಾಮಗಾರಿಯು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತವೆ.<br><br>ಮುಂದುವರೆದು ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ/61/ಪಿಬಿಎಲ್/ 2022, ದಿನಾಂಕ:11/10/2022 ರ ಆದೇಶದಲ್ಲಿ 08 ಪೊಲೀಸ್ ಠಾಣೆಗಳಿಗೆ ಹಾಗೂ ದಿನಾಂಕ:15.07.2022ರ ಆದೇಶದಲ್ಲಿ 06 ಪೊಲೀಸ್ ಠಾಣೆಗಳಿಗೆ ನಿರ್ಮಾಣ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ. ಕಾಮಗಾರಿ ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿದೆ. |

**ಸಂಖ್ಯೆ: ಹೆಚ್‌ಡಿ 11 ಪಿಬಿಎಲ್ 2023**

(ಆರಗ ಜ್ಞಾನೇಂದ್ರ)
ಗೃಹ ಸಚಿವರು